ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಜಂ.ಆ/ಯ.ವ/ಪಿ.ಆರ್/57/2018-19

ಮುಖ್ಯ ಅಭಿಯಂತರರು
ಯಲಹಂಕ ವಲಯ
ಬಿಬಿಎಂಪಿ, ಬೆಂಗಳೂರು-92
ದಿನಾಂಕ: 5.12.2018

ಆಡಳಿತಾತ್ಮಕ ಅನುಮೋದನೆ

ವಿಷಯ: Providing Gym equipments to park in ward no-09 Vidyaranyapura

ಉಲ್ಲೇಖ: ಮುಖ್ಯ ಆರ್ಥಿಕ ಅಧಿಕಾರಿರವರ ಕಾಮಗಾರಿ ಸಂಖ್ಯೆ ಪ್ರಮಾಣ ಪತ್ರದ ಸಂಖ್ಯೆ:009-18-000058

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ವಿಭಾಗ) ರವರು **2018-19**ನೇ ಸಾಲಿನ ಲೋಕೋಪಯೋಗಿ ಇಲಾಖೆಯ ದರಪಟ್ಟಿಯಂತೆ ಪಿ-3250 ಲೆಕ್ಕ ಶೀರ್ಷಿಕೆಯಡಿಯಲ್ಲಿ ಮೇಲ್ಕಂಡ ಕಾಮಗಾರಿಯನ್ನು ರೂ40.00/-ಲಕ್ಷಗಳಿಗೆ ಕಾಮಗಾರಿಯನ್ನು ಕೈಗೊಳ್ಳಲು ಉಲ್ಲೇಖದಂತೆ ಸದರಿ ಕಾಮಗಾರಿಗೆ ಕಾಮಗಾರಿ ಸಂಕೇತ ದೊರೆತಿರುತ್ತದೆ. ಅದರಂತೆ ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ವಿಭಾಗ) ರವರು ಅಂದಾಜು ಪಟ್ಟಿಯನ್ನು ತಯಾರಿಸಿ ಆಡಳಿತಾತ್ಮಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಮಾನ್ಯ ಆಯುಕ್ತರವರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ: ಬಿ12(1)/ಪಿ.ಆರ್/394/2011-12 ದಿನಾಂಕ:04-10-2018ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ ಹಾಗೂ ಆಡಳಿತಾತ್ಮಕ ಅನುಮೋದನೆ ಪುಸ್ತಕ ಪುಟ ಸಂಖ್ಯೆ 12 ಕ್ರ.ಸಂ 57ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ಕಾಮಗಾರಿಯನ್ನು ಕರ್ನಾಟಕ ಪಾರದರ್ಶಕ ನಿಯಮಾನುಸಾರ ನಿರ್ವಹಿಸಲು ಕ್ರಮ ವಹಿಸುವುದು.
2. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History Book/Poperty register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ಧಗೊಳಿಸುವುದು.
3. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
4. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆಯುವುದು.

ಮುಖ್ಯ ಅಭಿಯಂತರರು
ಯಲಹಂಕ ವಲಯ
ಬಿಬಿಎಂಪಿ ಬೆಂಗಳೂರು-92

ಪ್ರತಿಯನ್ನು:

1. ಮುಖ್ಯ ಅಭಿಯಂತರರು ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ.
2. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರಿಗೆ, ಸೂಕ್ತ ಕ್ರಮಕ್ಕಾಗಿ.